**All India Radio: Bangalore**
**Regional Bulletin In Kannada**
**10.08.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಬೆಂಗಳೂರಿನಲ್ಲಿಂದು ಮೆಟ್ರೋ ಮೂರನೇ ಹಂತದ ಯೋಜನೆಗೆ ಪ್ರಧಾನಿ ನರೇಂದ್ರ ಮೋದಿ ಶಂಕುಸ್ಥಾಪನೆ
2. ಬಹು ನಿರೀಕ್ಷಿತ ಮೆಟ್ರೋ ಹಳದಿ ರೈಲು ಮಾರ್ಗಕ್ಕೆ ಪ್ರಧಾನಿ ಹಸಿರು ನಿಶಾನೆ ; ರೈಲಿನಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ
3. ಬೆಂಗಳೂರು-ಬೆಳಗಾವಿ ವಂದೇ ಭಾರತ್ ರೈಲು ಸೇರಿದಂತೆ ಮೂರು ರೈಲು ಲೋಕಾರ್ಪಣೆಗೊಳಿಸಿದ ಪ್ರಧಾನಿ
4. ಬೆಂಗಳೂರಿನ ದೇವನಹಳ್ಳಿ ವಿಶ್ವದಲ್ಲಿಯೇ ಅತಿದೊಡ್ಡ ಐಫೋನ್ ಉತ್ಪಾದನಾ ಕೇಂದ್ರ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
5. ಮೆಟ್ರೋ ೩ನೇ ಹಂತದ ಯೋಜನೆಯಿಂದ ಬೆಂಗಳೂರಿನ ಟ್ರಾಫಿಕ್ ಸಮಸ್ಯೆಗೆ ಸಂಪೂರ್ಣ ಮುಕ್ತಿ - ಮುಖ್ಯಮಂತ್ರಿ ಸಿದ್ದರಾಮಯ್ಯ
6. ಮೈಸೂರಿಗೆ ಇಂದು ಆಗಮಿಸಲಿರುವ ಅಭಿಮನ್ಯು ನೇತೃತ್ವದ ಗಜಪಡೆ ; ಜಿಲ್ಲಾಡಳಿತದಿಂದ ಸಂಜೆ ಸಾಂಪ್ರದಾಯಿಕ ಸ್ವಾಗತ

<><><><>

ಪ್ರಧಾನಿ ನರೇಂದ್ರ ಮೋದಿ ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯಲ್ಲಿರುವ ಐಐಐಟಿ ಸಭಾಂಗಣದಲ್ಲಿ ಇಂದು ಮೂರನೇ ಹಂತದ ಹೊಸಹಳ್ಳಿಯಿಂದ ಕಡಬಗೆರೆವರೆಗಿನ ಮಾರ್ಗದ ಮೆಟ್ರೋ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಮಾತನಾಡಿದ ಪ್ರಧಾನಿ, ಕನ್ನಡದಲ್ಲೇ ಭಾಷಣ ಆರಂಭಿಸಿ, ನಾಡಪ್ರಭು ಕೆಂಪೇಗೌಡರನ್ನು ಸ್ಮರಿಸಿದರು. ಕರ್ನಾಟಕ ರಾಜ್ಯದ ಸಂಸ್ಕೃತಿ ಹಾಗೂ ಕೊಡುಗೆಯನ್ನು ಇದೇ ಸಂದರ್ಭದಲ್ಲಿ ಸ್ಮರಿಸಿದರು. ತಂತ್ರಜ್ಞಾನವನ್ನು ಪರಂಪರೆಗೆ ಜೋಡಿಸಿರುವುದು ಬೆಂಗಳೂರು ಎಂದು ಕೊಂಡಾಡಿದರು.

ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ನಮಸ್ಕಾರ ಬೆಂಗಳೂರು ಚೆನ್ನಾಗಿದ್ದೀರಾ ಎಂದು ಕನ್ನಡದಲ್ಲೇ ಮಾತನಾಡುವ ಮೂಲಕ ಭಾಷಣ ಆರಂಭಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರ ೧೧ ವರ್ಷದ ದೂರಸಂವೇದಿ ನಾಯಕತ್ವದಲ್ಲಿ ಭಾರತ ಇಂದು ವಿಶ್ವದಲ್ಲಿ ಎಲ್ಲಾ ವಲಯಗಳಲ್ಲಿ ಸುಧಾರಣೆ ಸಾಧಿಸಿದೆ ಎಂದು ತಿಳಿಸಿದರು. ದೇಶದ ಎಲೆಕ್ಟ್ರಾನಿಕ್ ಉಪಕರಣಗಳ ರಫ್ತಿನಲ್ಲಿ ೭ ಪಟ್ಟು ಹೆಚ್ಚಳವಾಗಿದ್ದು, ವಿಶ್ವದಲ್ಲಿಯೇ ಭಾರತ ಮೊಬೈಲ್ ಉತ್ಪಾದನೆಯಲ್ಲಿ ೨ನೇ ರಾಷ್ಟ್ರವಾಗಿ ಹೊರ ಹೊಮ್ಮಿದೆ ಎಂದು ಹೇಳಿದರು. ಬೆಂಗಳೂರಿನ ದೇವನಹಳ್ಳಿ ವಿಶ್ವದಲ್ಲಿಯೇ ಅತಿದೊಡ್ಡ ಐಫೋನ್ ಉತ್ಪಾದನಾ ಕೇಂದ್ರವಾಗಿದ್ದು, ಅಮೆರಿಕಗೆ ಅತಿ ಹೆಚ್ಚು ಮೊಬೈಲ್ ಫೋನ್ ರಫ್ತು ಮಾಡುವ ರಾಷ್ಟ್ರವಾಗಿದೆ ಎಂದು ಅಮೆರಿಕಾಗೆ ತಿರುಗೇಟು ನೀಡಿದರು.

ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ಮೆಟ್ರೋ ಯೋಜನೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಜಂಟಿ ಕಾರ್ಯಕ್ರಮವಾಗಿದೆ. ಈವರೆಗೆ ೩ ಸಾವಿರದ ೯೮೭ ಕೋಟಿ ರೂಪಾಯಿ ಮರು ಪಾವತಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಆದರೆ ಕೇಂದ್ರ ಸರ್ಕಾರ ನೀಡಿರುವುದು ೭ ಸಾವಿರ ಕೋಟಿ ರೂಪಾಯಿ ಎಂದು ಹೇಳಿದ್ದಾರೆ. ೨೦೩೦ಕ್ಕೆ ೩೦ ಕಿಲೋಮೀಟರ್ ಉದ್ದದ ಮೆಟ್ರೋ ರೈಲು ಮಾರ್ಗವನ್ನು ಪೂರ್ಣಗೊಳಿಸಲಾಗುವುದು ಎಂದು

ಮುಖ್ಯಮಂತ್ರಿ ಭರವಸೆ ನೀಡಿದ್ದಾರೆ. ಈ ಯೋಜನೆಯಿಂದ ಬೆಂಗಳೂರಿನ ಟ್ರಾಫಿಕ್ ಸಮಸ್ಯೆಗೆ ಮುಕ್ತಿ ಸಿಗಲಿದೆ ಎಂದು ಹೇಳಿದ್ದಾರೆ.

ಇದಕ್ಕೂ ಮೊದಲು ಪ್ರಧಾನಿಯವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗಣೇಶನ ವಿಗ್ರಹ ನೀಡಿ ಸನ್ಮಾನಿಸಿದರು.  ೪೪.೬೫ ಕಿಲೋಮೀಟರ್ ಉದ್ದದ ಈ ಯೋಜನೆಗೆ ೧೫ ಸಾವಿರದ ೬೧೧ ಕೋಟಿ ವೆಚ್ಚವಾಗಲಿದೆ. ಕಾರ್ಯಕ್ರಮದಲ್ಲಿ ಸಂಸದರಾದ ಕೇಂದ್ರ ಸಚಿವರಾದ ಕುಮಾರಸ್ವಾಮಿ, ಸೋಮಣ್ಣ, ಮನೋಹರ್ ಲಾಲ್ ಕಟ್ಟರ್, ಸಂಸದ ತೇಜಸ್ವಿ ಸೂರ್ಯ, ಸಚಿವ ಬೈರತಿ ಸುರೇಶ್, ಇನ್ಫೋಸಿಸ್ ಸಂಸ್ಥೆಯ ಮುಖ್ಯಸ್ಥರಾದ ನಾರಾಯಣಮೂರ್ತಿ, ಬಯೋಕಾನ್ ಮುಖ್ಯಸ್ಥೆ ಕಿರಣ್ ಮಜುಂದಾರ್ ಉಪಸ್ಥಿತರಿದ್ದರು.

<><><><>

ಪ್ರಧಾನಿ ನರೇಂದ್ರ ಮೋದಿ ಬೆಂಗಳೂರಿನಲ್ಲಿಂದು ಮೆಟ್ರೋ ಹಳದಿ ರೈಲು ಮಾರ್ಗಕ್ಕೆ ರಾಗಿಗುಡ್ಡ ನಿಲ್ದಾಣದಲ್ಲಿ ಹಸಿರು ನಿಶಾನೆ ತೋರಿದರು. ಮೆಟ್ರೋ ನಿಲ್ದಾಣದಲ್ಲಿ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ಟಿಕೆಟ್ ಖರೀದಿಸಿ ಪ್ರಯಾಣಿಸಿದರು. ಇದೇ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಅಧಿಕಾರಿಗಳು ಈ ರೈಲು ಮಾರ್ಗದ ನೀಲನಕ್ಷೆಯನ್ನು ಪ್ರಧಾನಿಯವರಿಗೆ ವಿವರಿಸಿದರು. ಬಳಿಕ ಪ್ರಧಾನಿಯವರು ಸರ್ಕಾರಿ ಶಾಲೆಯ ೧೬ ಮಕ್ಕಳೊಂದಿಗೆ ಮೆಟ್ರೋದಲ್ಲಿ ಪ್ರಯಾಣಿಸಿ ಸಂವಾದ ನಡೆಸಿದರು. ಈ ಸಂದರ್ಭದಲ್ಲಿ ಯೋಜನೆಯಲ್ಲಿ ಕೆಲಸ ಮಾಡಿದ ೮ ಕಾರ್ಮಿಕರು ಪ್ರಧಾನಿಯವರೊಂದಿಗೆ ಪ್ರಯಾಣಿಸಿದರು. ಈ ಸಂದರ್ಭದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೇಂದ್ರ ಸಚಿವರಾದ ಮನೋಹರ್ ಲಾಲ್ ಕಟ್ಟರ್, ಅಶ್ವಿನಿ ವೈಷ್ಣವ್, ಶೋಭಾ ಕರಂದ್ಲಾಜೆ, ಹೆಚ್.ಡಿ. ಕುಮಾರಸ್ವಾಮಿ, ವಿ. ಸೋಮಣ್ಣ, ಸಂಸದರಾದ ತೇಜಸ್ವಿ ಸೂರ್ಯ, ಡಾ. ಸಿ.ಎನ್. ಮಂಜುನಾಥ್ ಉಪಸ್ಥಿತರಿದ್ದರು. ರಾಗಿಗುಡ್ಡ ಮೆಟ್ರೋ ನಿಲ್ದಾಣದಲ್ಲಿ ಸಾವಿರಾರು ಮಂದಿ ಪ್ರಧಾನಿಯವರನ್ನು ನೋಡಲು ಜಮಾಯಿಸಿದ್ದರು. ಆರ್.ವಿ. ರಸ್ತೆಯಿಂದ ಬೊಮ್ಮಸಂದ್ರದವರೆಗಿನ ೧೯.೧೫ ಕಿಲೋಮೀಟರ್ ಉದ್ದದ ಈ ಮೆಟ್ರೋ ಹಳದಿ ರೈಲು ಮಾರ್ಗದಲ್ಲಿ ಒಟ್ಟು ೧೬ ನಿಲ್ದಾಣಗಳಿವೆ.

<><><><>

ಬೆಂಗಳೂರಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬೆಂಗಳೂರು-ಬೆಳಗಾವಿ ವಂದೇ ಭಾರತ್ ರೈಲು ಸೇರಿದಂತೆ ಮೂರು ವಂದೇ ಭಾರತ್ ರೈಲುಗಳಿಗೆ ಹಸಿರು ನಿಶಾನೆ ತೋರಿದರು. ಅಮೃತ್‌ಸರ್-ಶ್ರೀ ಮಾತಾ ವೈಷ್ಣೋದೇವಿ ಕತ್ರಾ ಹಾಗೂ ನಾಗ್‌ಪುರ್-ಪುಣೆ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೂ ವರ್ಚುವಲ್ ಮೂಲಕ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್,  ಮನೋಹರ್‌ಲಾಲ್ ಕಟ್ಟರ್, ಶೋಭಾ ಕರಂದ್ಲಾಜೆ, ವಿ. ಸೋಮಣ್ಣ ಹಾಗೂ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ದಿನೇಶ್ ಗುಂಡೂರಾವ್, ಉಪಸ್ಥಿತರಿದ್ದರು. ಬೆಂಗಳೂರು-ಬೆಳಗಾವಿ ವಂದೇ ಭಾರತ್ ರೈಲು ೮ ಜಿಲ್ಲೆಗಳ ಪ್ರಯಾಣಿಕರಿಗೆ ಪ್ರಯೋಜನ ನೀಡಲಿದ್ದು, ವಾರದಲ್ಲಿ ೬ ದಿನಗಳು ಕಾರ್ಯ ನಿರ್ವಹಿಸಲಿದೆ. ಇದು ರಾಜ್ಯದ ೧೧ನೇ ವಂದೇ ಭಾರತ್ ರೈಲಾಗಿದೆ. ಇದಕ್ಕೂ ಮೊದಲು ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಏರ್‌ಫೋರ್ಸ್ ಹೆಚ್.ಕ್ಯೂ.ಟಿ.ಸಿ ಹೆಲಿಪ್ಯಾಡ್‌ನಲ್ಲಿ ಪ್ರಧಾನಿ ಮೋದಿ ಅವರನ್ನು ಬರಮಾಡಿಕೊಂಡರು.

<><><><>

ವಿಶ್ವ ವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವ ೨೦೨೫ರ ಜಂಬೂ ಸವಾರಿಯ ಗಜಪಡೆಗಳನ್ನು ಇಂದು ಸಂಪ್ರದಾಯಿಕವಾಗಿ ಪೂಜೆ ಸಲ್ಲಿಸಿ ಅರಮನೆ ಅವರಣಕ್ಕೆ ಬರ ಮಾಡಿಕೊಳ್ಳಲಾಗುತ್ತಿದೆ. ಅಂಬಾವಿಲಾಸ

ಅರಮನೆಯ ಜಯಮಾರ್ತಂಡ ದ್ವಾರದ ಬಳಿ ಸಂಜೆ ೮:೪೫ ರ ವೇಳೆಗೆ ಚಿನ್ನದ ಅಂಬಾರಿ ಹೊರುವ ಅಭಿಮನ್ಯು, ಭೀಮ, ಕಂಜನ್, ಧನಂಜಯ, ಪ್ರಶಾಂತ, ಮಹೇಂದ್ರ ಆನೆಗಳು ಸೇರಿದಂತೆ ಒಟ್ಟು ೬ ಆನೆಗಳಿಗೆ ಮೈಸೂರು ಜಿಲ್ಲಾಡಳಿತದ ವತಿಯಿಂದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಪುಷ್ಪರ್ಚನೆ ಮಾಡುವ ಮೂಲಕ ಸಾಂಪ್ರದಾಯಿಕ ಸ್ವಾಗತ ನೀಡಲಿದ್ದಾರೆ. ಎಂದಿನಂತೆ ಪೊಲೀಸ್ ವಂದನೆ ಸ್ವೀಕರಿಸಿ ಮೊದಲ ತಂಡದ ಎಲ್ಲಾ ಆನೆಗಳು ಅರಮನೆ ಪ್ರವೇಶಸಲಿವೆ. ಜಂಬೂ ಸವಾರಿಯ ಆನೆಗಳು ಅರಮನೆ ಪ್ರವೇಶ ಮಾಡಿದ ಬಳಿಕ ಹಂತ ಹಂತವಾಗಿ ತಾಲೀಮು ಆರಂಭಿಸಲಿವೆ.

<><><><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಗಣೇಶನ ಮೂರ್ತಿ ಪ್ರತಿಷ್ಠಾಪನೆ ಹಾಗೂ ಈದ್ ಮಿಲಾದ್ ಹಬ್ಬಕ್ಕೆ ಅನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ತಿಳಿಸಿದ್ದಾರೆ. ಆಯೋಜಕರು ಇದೇ ೨೮ ರಿಂದ ಸೆಪ್ಟಂಬರ್ ೨ ರವರೆಗೆ ಬೆಳಿಗ್ಗೆ ೧೦ ಗಂಟೆಯಿಂದ ಸಂಜೆ ೫ ಗಂಟೆಯೊಳಗೆ ನಿಗದಿತ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವಂತೆ ಹೇಳಿದ್ದಾರೆ. ಧಾರ್ಮಿಕ ಕಾರ್ಯಕ್ರಮಗಳ ಆಯೋಜಕರಿಗೆ ಪರವಾನಗಿ, ಅನುಮತಿ ನೀಡುವುದು ಅತ್ಯವಶ್ಯಕ ಎಂದು ಸ್ಪಷ್ಟಪಡಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>